# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 366 |
| ಸದಸ್ಯರ ಹೆಸರು | ಶ್ರೀ ಶರಣಗೌಡ ಬಯ್ಯಾಪುರ<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19-08-2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಹೊಸದಾಗಿ ಹೋಬಳಿ ಕೇಂದ್ರಗಳನ್ನು ಘೋಷಿಸುವ ಕುರಿತು ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; | ಬಂದಿದೆ. |
| ಆ) | ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ದೋಟಿಹಾಳ ಗ್ರಾಮವನ್ನು ಹೋಬಳಿ ಕೇಂದ್ರವನ್ನಾಗಿ ಘೋಷಿಸಲು, ಜಿಲ್ಲಾಧಿಕಾರಿಗಳು, ಕೊಪ್ಪಳ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಸದರಿ ಪ್ರಸ್ತಾವನೆಯಂತೆ, ದೋಟಿಹಾಳ ಗ್ರಾಮವನ್ನು ಹೋಬಳಿ ಕೇಂದ್ರವನ್ನಾಗಿ ಘೋಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ವಿಳಂಬವಾಗಲು ಕಾರಣಗಳೇನು; | ನೂತನ ಹೋಬಳಿಗಳನ್ನು ರಚಿಸುವ ವಿಷಯವು ಸರ್ಕಾರದ ಸಾಮಾನ್ಯ ನೀತಿಗೆ ಸಂಬಂಧಿಸಿದ್ದಾಗಿದೆ. ಯಾವುದೇ ಒಂದು ಗ್ರಾಮವನ್ನು ಹೋಬಳಿ ಕೇಂದ್ರವಾಗಿ ರಚಿಸಬೇಕಾದರೆ ಭೌಗೋಳಿಕ ಮತ್ತು ಆಡಳಿತಾತ್ಮಕ ಅಗತ್ಯತೆಗಳ ಜೊತೆಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸಹ ಅವಲಂಬಿಸಿದ್ದು, ಸಂಪನ್ಮೂಲಗಳ ಕ್ರೋಢೀಕರಣ ಮತ್ತು ಹಣಕಾಸಿನ ಇತಿಮಿತಿಗಳನ್ನು ಒಳಗೊಂಡಿರುತ್ತದೆ.<br><br>2026ನೇ ಸಾಲಿನಲ್ಲಿ ಜನಗಣತಿ ನಡೆಸಲು ಕೇಂದ್ರ ಸರ್ಕಾರವು ಉದ್ದೇಶಿಸಿದ್ದು, ದಿನಾಂಕ: 01-01-2026 ರಿಂದ 31-03-2027ರ ವರೆಗೆ ಆಡಳಿತಾತ್ಮಕ ಗಡಿಗಳನ್ನು ಬದಲಾವಣೆ ಮಾಡದಂತೆ ಕೇಂದ್ರ ಸರ್ಕಾರವು ರಾಜ್ಯಕ್ಕೆ ಸೂಚನೆ ನೀಡಿರುತ್ತದೆ.<br><br>ಆದ್ದರಿಂದ, ಸರ್ಕಾರವು ಪ್ರಸ್ತುತ ಹೊಸ ಹೋಬಳಿಗಳ ರಚನೆಗೆ ಯಾವುದೇ ತಾತ್ವಿಕ ನಿರ್ಣಯ ಕೈಗೊಂಡಿರುವುದಿಲ್ಲ. ಅಲ್ಲದೇ ಇಂತಹ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯು ಸಹಮತಿ ನೀಡುತ್ತಿರುವುದಿಲ್ಲ. |
| ಈ) | ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಹಟ್ಟಿ ಮತ್ತು ನಾಗರಹಾಳ ಗ್ರಾಮಗಳನ್ನು ಹೋಬಳಿ ಕೇಂದ್ರಗಳನ್ನಾಗಿ ಘೋಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಪೂರ್ಣ ಮಾಹಿತಿಯನ್ನು ಒದಗಿಸುವುದು) | |

**ಸಂಖ್ಯೆ: ಕಂಇ 37 ಎಲ್‌ಆರ್‌ಡಿ 2026**

(ಡಾ. ಜಿ ಪರಮೇಶ್ವರ)
ಉಪ ಮುಖ್ಯಮಂತ್ರಿ
ಕಂದಾಯ ಹಾಗೂ ಕ್ರೀಡಾ ಸಚಿವರು